Women kurtis starting from Rs.349 onwards






# ನಿಡ್ಡೋಡಿಯ ರೈತನ ಮಗಳು ಮಿಶಲ್ ಯುಪಿಎಸ್ಸಿ ಸಾಧಕಿ!

Written by: ಮಂಗಳೂರು ಪ್ರತಿನಿಧಿ Updated: Thursday, May 12, 2016, 16:53 [IST]

145 129 3 3.5 11



ಯುಪಿಎಸ್ಸಿ ಪರೀಕ್ಷೆಯಲ್ಲಿ 387ನೇ ಶ್ರೇಯಾಂಕ ಪಡೆದ ನಿಡ್ಡೋಡಿಯ ಮಿಶಲ್ ಕ್ವೀನಿ ಡಿ'ಕೋಸ್ತರಿಗೆ ಗ್ರಾಮೀಣ ಪ್ರದೇಶದಲ್ಲಿ ಸೇವೆ ಮಾಡುವಾಸೆ.

2015ನೇ ಸಾಲಿನ ಯುಪಿಎಸ್ಸಿ ಪರೀಕ್ಷೆಯಲ್ಲಿ ಮಂಗಳೂರು ತಾಲೂಕಿನ ಗ್ರಾಮೀಣ ಪ್ರದೇಶ ನಿಡ್ಡೋಡಿ ಗ್ರಾಮದ ನೀರುಡೆಯ ಮಿಶಾಲ್ ಕ್ವೀನಿ ಡಿ'ಕೋಸ್ತ 387ನೇ rank ಪಡೆದಿದ್ದಾರೆ. ಉತ್ತಮ ಫಲಿತಾಂಶ ದಾಖಲಿಸುವ ಮೂಲಕ ಹೆತ್ತವರಿಗೆ, ಊರಿಗೆ ಕೀರ್ತಿ ತಂದಿರುವ ಮಿಶಲ್ ಕ್ವೀನಿ ಡಿ'ಕೋಸ್ತ ದಕ್ಷ ಐಎಎಸ್ ಅಧಿಕಾರಿಯಾಗಿ ಗ್ರಾಮೀಣ ಪ್ರದೇಶದಲ್ಲಿಯೇ ಸೇವೆ ಮಾಡಬೇಕೆನ್ನುವ ಆಸೆಯನ್ನು ಹೊಂದಿದ್ದಾರೆ.[ಯುಪಿಎಸ್ಸಿ: ಕರ್ನಾಟಕದ ಸಾಧಕರಿಗೊಂದು ಅಭಿನಂದನೆ]

ಮಿಶಲ್ ಪ್ರಾಥಮಿಕ ಶಾಲಾ ವಿದ್ಯಾಭ್ಯಾಸವನ್ನು ಕನ್ನಡ ಮಾಧ್ಯಮದಲ್ಲಿ ನೀರುಡೆಯ ಸೈಂಟ್ ಫ್ರಾನ್ಸಿಸ್ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಾಗೂ ಪ್ರೌಢಶಾಲಾ ವಿದ್ಯಾಭ್ಯಾಸವನ್ನು ಕಿನ್ನಿಗೋಳಿಯ ಲಿಟ್ಲ್ ಫ್ಲವರ್ ಪ್ರೌಢಶಾಲೆಯಲ್ಲಿ ಮಾಡಿದ್ದರು. ಮೂಡುಬಿದಿರೆ ಆಳ್ವಾಸ್ ಪ.ಪೂ. ಕಾಲೇಜಿನಲ್ಲಿ 92.6 ಶೇ. ಅಂಕಗಳೊಂದಿಗೆ ದ್ವಿತೀಯ ಪಿ.ಯು. ತೇರ್ಗಡೆಯಾಗಿ ಬೆಂಗಳೂರಿನ ಆರ್‌ವಿಸಿಇ ಕಾಲೇಜಿಗೆ ಸೇರಿ ಇನ್ಫರ್ಮೇಶನ್ ಅಂಡ್ ಸೈನ್ಸ್ ವಿಭಾಗದಲ್ಲಿ ಇಂಜಿನಿಯರಿಂಗ್ ಪದವಿ ಗಳಿಸಿದ್ದಾರೆ. [ಯುಪಿಎಸ್ಸಿಯಲ್ಲಿ 56ನೇ ಶ್ರೇಯಾಂಕ ಪಡೆದ ಮೈಸೂರಿನ ಹುಡುಗ]

ಬಿ.ಇ. ಮುಗಿಸಿ ಸುಮಾರು ಒಂದೂವರೆ ವರ್ಷ ಸಿವಿಲ್ ಸರ್ವಿಸ್ ಕೋಚಿಂಗ್ ಪಡೆದುಕೊಳುತ್ತಿರುವಂತೆಯೇ ಕೆಪಿಎಸ್ಸಿ ಪರೀಕ್ಷೆಯನ್ನು ಬರೆದು ಉತ್ತಮ ಅಂಕಗಳೊಂದಿಗೆ ಉತ್ತೀರ್ಣರಾಗಿದ್ದರು. ಬಳಿಕ 2015ರಲ್ಲಿ ಯುಪಿಎಸ್ಸಿ ಪರೀಕ್ಷೆ ಬರೆದು 387 rank ಪಡೆದು ಕೊಂಡಿದ್ದಾರೆ.[ಯುಪಿಎಸ್ಸಿ ಫಲಿತಾಂಶ : ಕರ್ನಾಟಕದ ಗೌಡಗೆ 105ನೇ ಸ್ಥಾನ]






Enter Email Id for Daily Newslett
Subscribe

JABONG
Jabong Sale: Flat Rs.5000 Off Across Site